106

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ .ಜಿ ನಮೋಶಿ, ಶ್ರೀ ಎಸ್ ವ್ಹಿ ಸಂಕನೂರ, ಶ್ರೀ ರವಿ ಕುಮಾರ್ ಹಾಗೂ ಇತರರು ಮಂಡಿಸಿರುವ ನಿಯಮ 72 ರ ಗಮನ ಸೆಳೆಯುವ ಸೂಚನೆಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಹೇಳಿಕೆ:**

* * *

ವಿಷಯ:- ಕಳೆದ 13 ವರ್ಷಗಳಿಂದ ಪ್ರೌಢಶಾಲಾ ಶಿಕ್ಷಕರುಗಳಿಗೆ ಪದವಿಪೂರ್ವ ಕಾಲೇಜಿಗೆ ಉಪನ್ಯಾಸಕರಾಗಿ ಬಡ್ತಿ ನೀಡುವುದಿಲ್ಲ. ಈ ಬಗ್ಗೆ ಹಲವಾರು ಬಾರಿ ಇಲಾಖೆಯ ಗಮನಕ್ಕೆ ತಂದಿದ್ದರು ಕೂಡ ಕ್ರಮ ಕೈಗೊಂಡಿರುವುದಿಲ್ಲ ಮತ್ತು ವಿಷಯವಾರು ಶಿಕ್ಷಕರ ಬಡ್ತಿಯ ಅಂಕಿ ಅಂಶಗಳನ್ನು ಕೂಡ ಪ್ರಕಟಿಸಿರುವುದಿಲ್ಲ ಮತ್ತು ಜೇಷ್ಠತಾ ಪಟ್ಟಿಯನ್ನು ತಯಾರಿಸುವುದರಲ್ಲಿಯೇ ಕಾಲಹರಣ ಮಾಡುತ್ತಿರುವ ಬಗ್ಗೆ ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 71 ಎಸ್‌ಆರ್‌ಇ 94 ದಿ: 27/05/1998 ರಲ್ಲಿ ಶೇಕಡ 50 ರಷ್ಟು ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 50 ರಷ್ಟು ಪ್ರೌಢಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿತ್ತು. 2014ರಲ್ಲಿ ವೃಂದ ಮತ್ತು ನೇಮಕಾತಿ ನಿಯಮ ಪರಿಷ್ಕರಿಸಲಾಗಿದ್ದು, ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಒ 2009 ದಿನಾಂಕ: 15-05-2014 ರಂತೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ನೇರ ನೇಮಕಾತಿಗೆ 75% ರಷ್ಟು ಮತ್ತು ಸರ್ಕಾರಿ ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಗೆ ಪದೋನ್ನತಿ ನೀಡಲು 25% ರಷ್ಟು ಭರ್ತಿ ಮಾಡಲು ಅವಕಾಶ ಕಲ್ಪಿಸಿರುತ್ತದೆ, ಅದರಂತೆ ಕ್ರಮವಹಿಸಲಾಗುತ್ತಿದೆ.

ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ನಾತಕೋತ್ತರ ಪದವಿ ಪಡೆದಿರುವ ಸಹ ಶಿಕ್ಷಕರುಗಳಿಗೆ ನಿಯಮಗಳನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರ ಹುದ್ದೆಗಳಿಗೆ ಶೇ.25ರಷ್ಟು, ಪದೋನ್ನತಿ ನೀಡುವ ಸಂಬಂಧ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ತಯಾರಿಸುವ ಕುರಿತು ಸರ್ಕಾರದ ಪತ್ರ ಸಂಖ್ಯೆಃ ಇಪಿ 164 ಎಸ್‌ಒಹೆಚ್ 2023 ದಿನಾಂಕಃ 23-10-2024 ರಲ್ಲಿ ಆಯುಕ್ತರು ಮತ್ತು ಅಪರ ಆಯುಕ್ತರು , ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957 ರ ನಿಯಮ 7ಎ ರಂತೆ ಅಗತ್ಯ ಕ್ರಮಹಿಸಲು ಸೂಚಿಸಲಾಗಿತ್ತು. ಅದರನ್ವಯ, ನಿರ್ದೇಶಕರು (ಪ್ರೌಢಶಿಕ್ಷಣ), ಶಾಲಾ ಶಿಕ್ಷಣ ಇಲಾಖೆ, ಆಯುಕ್ತರ ಕಚೇರಿ, ನೃಪತುಂಗ ರಸ್ತೆ, ಬೆಂಗಳೂರು. ಇವರ ಅಧಿಸೂಚನೆ ಸಂಖ್ಯೆ: ಸಿ(2)ಪ್ರೌ.ಶಾ.ಶಿ.ಉ.ಬಡ್ತಿ-02/2020-21, ದಿನಾಂಕ: 22/07/2025 ರಲ್ಲಿ ದಿನಾಂಕ: 01/01/2025 ರಲ್ಲಿದ್ದಂತೆ ಪ್ರೌಢ ಶಿಕ್ಷಣ ವಿಭಾಗದ ನಿರ್ದೇಶಕರು ಪ್ರೌಢಶಾಲಾ ಸಹ ಶಿಕ್ಷಕರುಗಳಿಗೆ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ ಸ್ನಾತಕೋತ್ತರ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರ ರಾಜ್ಯ ಮಟ್ಟದ ಒಂದೇ ಜೇಷ್ಠತಾ ಪಟ್ಟಿಯನ್ನು ಉಪನ್ಯಾಸಕರ ಹುದ್ದೆ ಬಡ್ತಿಗೆ ಮಾತ್ರ ಅನ್ವಯಿಸಿ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಿರುತ್ತಾರೆ.

ಪದವಿ ಪೂರ್ವ ಶಿಕ್ಷಣ ಇಲಾಖೆಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬಡ್ತಿ ಕೋಟಾದ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅರ್ಹ ಪ್ರೌಢಶಾಲಾ ಸಹಶಿಕ್ಷಕರನ್ನು ಆಯ್ಕೆ ಮಾಡಲು 2014 ರ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತಾ ಪರೀಕ್ಷೆ ನಡೆಸಲು ಒಂದು ಸಂಸ್ಥೆಯನ್ನು ನಿರ್ದಿಷ್ಟಪಡಿಸಿ ಆದೇಶ ಹೊರಡಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ.

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಸಂಖ್ಯೆ: ಇಪಿ 284 ಡಿಜಿಡಬ್ಲ್ಯೂ 2025